# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದಪ್ರಶ್ನೆ ಸಂಖ್ಯೆ:- | 1473 |
| ಸದಸ್ಯರ ಹೆಸರು: | ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು: | ಮಾನ್ಯ ಕಂದಾಯ ಸಚಿವರು |
| ಉತ್ತರಿಸಬೇಕಾದ ದಿನಾಂಕ:- | 19.03.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಉಳಿಕೆ ಮೂಲ ವೃಂದದ ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ ನ್ಯಾಯಾಲಯದ ಯಾವುದೇ ಆದೇಶವಿಲ್ಲದೇ ಇದ್ದರೂ ದಿನಾಂಕ:23.03.2021ರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲು ಕಾರಣವೇನು; | ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:10669- 10676/2021 ಅರ್ಜಿ ಸಂಖ್ಯೆ:10691-10698/2021 ದಿನಾಂಕ:23.12.2022ರ ಆದೇಶ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ:103880/2023 ದಿನಾಂಕ:26.09.2023ರ ಆದೇಶ, ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ರಿವ್ಯೂ ಪಿಟಷನ್ ಅರ್ಜಿ ಸಂಖ್ಯೆ:2007-2035/2023 ದಿನಾಂಕ:04.12.2023ರ ಆದೇಶ ಹಾಗೂ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:103456-457/2024 ಹಾಗೂ 107924/2024 ದಿನಾಂಕ:25.07.2024ರ ಆದೇಶಗಳನ್ವಯ, ದಿನಾಂಕ:25.06.2021ರಂದು ಪ್ರಕಟಿಸಲಾಗಿದ್ದ ಸ್ಥಳೀಯ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:18.10.2024ರಂದು ಆಕ್ಷೇಪಣೆ/ಸಲಹೆಗಳನ್ನು ಸಲ್ಲಿಸಲು 30 ದಿನಗಳ ಕಾಲಾವಶ ನೀಡಿ ಪ್ರಕಟಿಸಲಾಗಿರುತ್ತದೆ.<br><br>ಮೇಲ್ಕಂಡ ದಿನಾಂಕ: 25.06.2021ರ ಕಲ್ಯಾಣ ಕರ್ನಾಟಕ - ತಹಶೀಲ್ದಾರ್ ಗ್ರೇಡ್-2 ವೃಂದದ ಜೇಷ್ಠತಾ ಪಟ್ಟಿಯನ್ನು ಮಾನ್ಯ ಕೆ.ಎ.ಟಿ ಮತ್ತು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಗಳನ್ವಯ ಪರಿಷ್ಕರಿಸಿರುವುದರಿಂದ ಉಳಿಕೆ ಮೂಲ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯ ಮೇಲೆಯೂ ಸಹ ಪರಿಣಾಮ ಉಂಟಾಗುತ್ತದೆ. ಹೀಗಾಗಿ, ದಿನಾಂಕ:23.03.2021ರಂದು ಪ್ರಕಟಿಸಲಾಗಿದ್ದ ಉಳಿಕೆ ಮೂಲ ವೃಂದದ ಜೇಷ್ಠತಾ ಪಟ್ಟಿಯನ್ನು ಸಹ ಪರಿಷ್ಕರಿಸಲು ಸರ್ಕಾರವು ಪ್ರಜ್ಞಾಪೂರ್ವಕವಾಗಿ ಆಡಳಿತಾತ್ಮಕ ತೀರ್ಮಾನ ಕೈಗೊಂಡು, ಮಾನ್ಯ ನ್ಯಾಯಾಲಯಕ್ಕೆ ಸದರಿ ಮಾಹಿತಿಯನ್ನು ನೀಡಿ ದಿನಾಂಕ:18.10.2024 ರಂದು ಉಳಿಕೆ ಮೂಲ ವೃಂದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.<br><br>ಮೇಲ್ಕಂಡ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳಿಗೆ |
| (ಆ) | ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ ಕರಡು ಜೇಷ್ಠತಾ ಪಟ್ಟಿಯನ್ನು ದಿನಾಂಕ:18.10.2024 ರಂದು ಪ್ರಕಟಿಸಿದ 5 ತಿಂಗಳ ನಂತರವೂ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸದೇ ಇರಲು ಕಾರಣವೇನು: | |
| (ಇ) | ಕಳೆದ 02 ವರ್ಷದಿಂದ ಕಂದಾಯ ಇಲಾಖೆಯಲ್ಲಿ ಸಹಾಯಕ ಆಯುಕ್ತರು, ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ಹುದ್ದೆಗೆ ಪದೋನ್ನತಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| (ಈ) | ಸರ್ಕಾರವು ಸಹಾಯಕ ಆಯುಕ್ತರು, ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳಿಗೆ ಪದೋನ್ನತಿಯನ್ನು ಯಾವ ಕಾಲಾವಧಿಯಲ್ಲಿ ನೀಡುವ ಉದ್ದೇಶವನ್ನು ಹೊಂದಿದೆ; | |

| | | |
|---|---|---|
| (ಉ) | ಪದೋನ್ನತಿ ವಂಚಿತ ನೌಕರರ ಮನೋಬಲವನ್ನು ಸುಧಾರಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? | ಸಂಬಂಧಿಸಿದಂತೆ ಹಲವಾರು ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿದ್ದು, ಶೀಘ್ರದಲ್ಲಿಯೇ ತಹಶೀಲ್ದಾರ್ ಗ್ರೇಡ್-2 ವೃಂದದ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸಲಾಗುವುದು.<br><br>ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ ಹಾಗೂ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಹಲವು ಪ್ರಕರಣಗಳು ದಾಖಲಾಗಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ:25.07.2024 ರಂದು ನೀಡಿರುವ ಆದೇಶದನ್ವಯ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:18.10.2024 ರಂದು ಪ್ರಕಟಿಸಲಾಗಿದ್ದು, ಶೀಘ್ರದಲ್ಲಿಯೇ ಅಂತಿಮಗೊಳಿಸಿ, ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು.<br><br>ಹಾಗೆಯೇ, ಕಂದಾಯ ಇಲಾಖೆಯಲ್ಲಿ ಇನ್ನು ಮುಂದೆ ಮುಂಬಡ್ತಿ ಹಾಗೂ ಸೇವಾ ಜೇಷ್ಠತೆಗೆ ಸಂಬಂಧಿಸಿದಂತೆ ಗೊಂದಲಗಳು/ವ್ಯಾಜ್ಯಗಳು ಉಂಟಾಗದೇ ಇರಲು ಕಂದಾಯ ಇಲಾಖೆಯಲ್ಲಿ ತಹಶೀಲ್ದಾರ್ ಗ್ರೇಡ್-1 ಹಾಗೂ ತಹಶೀಲ್ದಾರ್ ಗ್ರೇಡ್-2 ವೃಂದದ "ವೃಂದ ಬಲವನ್ನು ಸಮಗ್ರವಾಗಿ ಪರಿಷ್ಕರಿಸಿ ಅಧಿಸೂಚನೆ ಹೊರಡಿಸಲು ಕ್ರಮವಹಿಸಲಾಗಿದೆ. |

ಸಂಖ್ಯೆ: ಕಂಇ 117 ಎಎಸ್‌ಡಿ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು